**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕಾವೇರಿ ಭವನದ ಎದುರು, ಕೆ.ಜಿ.ರಸ್ತೆ, ಬೆಂಗಳೂರು-560 009**

ಸಂಖ್ಯೆ: ಸಿಎಸಿ-02/ **GPTR-2022**//2022-23

ದಿನಾಂಕ:17-08-2022

## ಪ್ರಕಟಣೆ

2022ರ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿ (GPTR-2022) **ಸಂಬಂಧ ದಿನಾಂಕ:21.05.2022 ಮತ್ತು 22.05.2022** ರಂದು ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆ-1 ಮತ್ತು ಪತ್ರಿಕೆ-2ರ (ಓ.ಎಂ.ಆರ್ ಮತ್ತು ವಿವರಣಾತ್ಮಕ ಉತ್ತರ ಪತ್ರಿಕೆಗಳ) ಹಾಗೂ ಪತ್ರಿಕೆ-3 (ವಿವರಣಾತ್ಮಕ ಉತ್ತರ ಪತ್ರಿಕೆಗಳ) ಪತ್ರಿಕೆಗಳಲ್ಲಿ ಅಭ್ಯರ್ಥಿಗಳು ಗಳಿಸಿದ ವೈಯಕ್ತಿಕ ಅಂಕಗಳನ್ನು **ದಿನಾಂಕ:17.08.2022 ರಂದು** ಇಲಾಖಾ ವೆಬ್‌ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಿದೆ.

ಪರೀಕ್ಷಾ ನಿಯಮಗಳನ್ನು ಉಲ್ಲಂಘನೆ ಮಾಡಿರುವ ಹಾಗೂ ಇನ್ನಿತರ ಕಾರಣಗಳಿಂದ ಒಟ್ಟು 61 ಅಭ್ಯರ್ಥಿಗಳ ಫಲಿತಾಂಶವನ್ನು ತಡೆಯಿಡಿದಿದ್ದು, ಇಬ್ಬರು (02) ಅಭ್ಯರ್ಥಿಗಳನ್ನು ಅನರ್ಹಗೊಳಿಸಲಾಗಿದೆ. ಒಟ್ಟು 63 ಅಭ್ಯರ್ಥಿಗಳ ಪಟ್ಟಿಯನ್ನು ಇದರೊಂದಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ.

ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯ (ಸಿ.ಇ.ಟಿ) ಅಂಕಗಳನ್ನು ಮತ್ತು ಮೀಸಲಾತಿ ವಿವರಗಳನ್ನು ಹೊರತುಪಡಿಸಿ, ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡಿದ ವೈಯಕ್ತಿಕ ವಿವರಗಳಾದ **ಅಭ್ಯರ್ಥಿಯ ಹೆಸರು, ಅಭ್ಯರ್ಥಿಯ ತಂದೆ ಮತ್ತು ತಾಯಿಯ ಹೆಸರು, ಜನ್ಮದಿನಾಂಕ, ಪದವಿ, ಬಿ.ಇಡಿ/ಡಿ.ಎಲ್.ಇಡಿ ಮತ್ತು CTET /TET ಅಂಕಗಳಿಗೆ ಸಂಬಂಧಿಸಿದಂತೆ ಮಾತ್ರ** ತಿದ್ದುಪಡಿಗೆ **ದಿನಾಂಕ:18.08.2022 ರಿಂದ 24.08.2022 ಅವಕಾಶ ಕಲ್ಪಿಸಿದೆ.** ಈ ಮೇಲ್ಕಂಡ ಮಾಹಿತಿಗಳಲ್ಲಿ ತಿದ್ದುಪಡಿ ಅಗತ್ಯವಿರುವ ಅಭ್ಯರ್ಥಿಗಳು ಮಾತ್ರ ತಮ್ಮ ಮನವಿಯನ್ನು ಅಗತ್ಯ ದೃಢೀಕೃತ ಪ್ರಮಾಣ ಪತ್ರಗಳೊಂದಿಗೆ, ವಿಶೇಷಾಧಿಕಾರಿ, ಕೇಂದ್ರೀಕೃತ ದಾಖಲಾತಿ ಘಟಕ, ಕೆ.ಜಿ ರಸ್ತೆ ಬೆಂಗಳೂರು ಇವರಿಗೆ ಖುದ್ದಾಗಿ ಸಲ್ಲಿಸುವುದು. ಅಂಚೆ ಅಥವಾ ಇನ್ನಿತರೆ ಯಾವುದೇ ವಿಧಾನದಲ್ಲಿ ಸಲ್ಲಿಸಲಾಗುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. **ದಿನಾಂಕ:24-08-2022ರ ನಂತರ ಈ ಸಂಬಂಧ ಯಾವುದೇ ಮನವಿಗಳನ್ನು ಸ್ವೀಕರಿಸುವುದಿಲ್ಲ.**

ಸಹಿ/-

ಆಯುಕ್ತರು

ಸಾರ್ವಜನಿಕ ಶಿಕ್ಷಣ ಇಲಾಖೆ